



ಅರುಣ ಪಿ. ಭಟ್ಟ

## ವಾರಭವಿಷ್ಯ: 27.10.2022ರಿಂದ 02.11.2022ರವರೆಗೆ




ಉದ್ಯೋಗಿಗಳಿಗೆ ವಾರದ ಶುರುವಿನಲ್ಲಿ ಯಶಸ್ಸು ದೊರೆಯುತ್ತದೆ. ಇನ್ನು ಉದ್ಯೋಗದ ಹುಡುಕಾಟದಲ್ಲಿ ಇರುವವರು ಶ್ರಮವನ್ನು ಹೆಚ್ಚಿಸಿದರೆ ಯಶಸ್ಸು ನಿಮ್ಮದಾಗಲಿದೆ. ಜನಪ್ರಿಯತೆ ಹೆಚ್ಚಾಗಲಿದೆ. ಧಾರ್ಮಿಕ ಕ್ಷೇತ್ರಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಉದ್ಯೋಗಸ್ಥರಿಗೆ ಮೆಚ್ಚುಗೆ ಮಾತುಗಳನ್ನು ಕೇಳುವ ಅವಕಾಶಗಳಿವೆ. ಶುಭದಿನ 29. ನವದುರ್ಗಾ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ಸಾರ್ವಜನಿಕ ಸಂಪರ್ಕದ ಮೂಲಕ ಅನುಕೂಲ ಆಗಲಿದೆ. ಮೇಲಧಿಕಾರಿಗಳ ಜತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಕಾನೂನು ವಿಚಾರಗಳಲ್ಲಿ ವಿರೋಧಿಗಳ ವಿರುದ್ಧ ಮೇಲುಗೈ ಸಾಧಿಸುತ್ತೀರಿ. ಆದರೆ ವಾರದ ಶುರುವಿನಲ್ಲಿ ಆರೋಗ್ಯ ಸ್ಥಿತಿ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಪ್ರೀತಿಪಾತ್ರರ ಜತೆಗೆ ಬಾಂಧವ್ಯ ಮತ್ತಷ್ಟು ಸುಮಧುರ ಆಗುತ್ತದೆ. ಶುಭದಿನ 28. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೈವಾಹಿಕ ಜೀವನ ಸಂತೋಷವಾಗಿರುತ್ತದೆ. ಈವರೆಗಿನ ಭಿನ್ನಾಭಿಪ್ರಾಯ ಮತ್ತು ಮನಸ್ತಾಪಗಳು ನಿವಾರಣೆ ಆಗುತ್ತವೆ. ಆರೋಗ್ಯದ ಸಮಸ್ಯೆಗಳಿಂದ ಮುಕ್ತಿ ಸಿಗುತ್ತದೆ. ಆರ್ಥಿಕ ವಿಚಾರದಲ್ಲಿ ಉತ್ತಮ ಲಾಭವನ್ನು ಕಾಣಲಿದ್ದೀರಿ. ವಿವಿಧ ಸಮಾಜ ಸೇವೆ ಕಾರ್ಯಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ನಿಮ್ಮ ಸಾಮರ್ಥ್ಯದ ಕ್ಷೇತ್ರ ಯಾವುದು ಎಂಬ ಬಗ್ಗೆ ಅರಿವಾಗಲಿದೆ. ಶುಭದಿನ 30. ಸೌಂದರ್ಯ ಲಹರಿ ಪಠಿಸಿರಿ.




ನಿಮ್ಮ ನಡವಳಿಕೆ ವೃತ್ತಿಪರ ಬೆಳವಣಿಗೆಯನ್ನು ಸಂಬಂಧಿಕರು ಹೊಗಳಲಿದ್ದಾರೆ. ಸಾಲ ಮರುಪಾವತಿ ಮಾಡಲು ಸಾಧ್ಯವಾಗುತ್ತದೆ. ಆಹಾರ ಹಾಗೂ ಪ್ರೀತಿ ಪಾತ್ರರಿಗೆ ಔತಣ ನೀಡುವ ಸಂಗತಿಗೆ ಪ್ರಾಶಸ್ತ್ಯ ನೀಡಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ವೈವಾಹಿಕ ಜೀವನ ಸುಖಕರವಾಗಿರುತ್ತದೆ. ಆತ್ಮವಿಶ್ವಾಸ ಹೆಚ್ಚಾಗಲಿದ್ದು, ವ್ಯಕ್ತಿತ್ವದಲ್ಲಿ ಸಕಾರಾತ್ಮಕವಾದ ಬೆಳವಣಿಗೆ ಆಗಲಿದೆ. ಶುಭದಿನ 01. ಲಿಂಗಾಷ್ಟಕ ಪಠಿಸಿರಿ.




ವಿವಿಧ ಕ್ಷೇತ್ರಗಳಲ್ಲಿ ಇರುವವರಿಗೆ ವರ್ಚಸ್ಸು ಹೆಚ್ಚಲಿದೆ. ಬಡ್ತಿ ನಿರೀಕ್ಷೆ ಮಾಡುತ್ತಿರುವವರು ಶುಭ ಸುದ್ದಿಯನ್ನು ಕೇಳಲಿದ್ದೀರಿ. ಪ್ರೀತಿಪಾತ್ರರ ಜತೆ ಬಂಧ ಗಟ್ಟಿಯಾಗಲಿದೆ. ಆರೋಗ್ಯ ಉತ್ತಮವಾಗಿರುತ್ತದೆ. ನೀವು ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ಆರ್ಥಿಕವಾಗಿ ಆದಾಯ ಹೆಚ್ಚಾಗುತ್ತಾ ಸಾಗುತ್ತದೆ. ವಿದೇಶ ವ್ಯವಹಾರ ಹಾಗೂ ಹೂಡಿಕೆಯಲ್ಲಿ ಲಾಭ ಪಡೆಯಲಿದ್ದೀರಿ. ಶುಭದಿನ 29. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಭೂಮಿ ವಿಚಾರಕ್ಕೆ ಸಂಬಂಧಿಸಿದಂತೆ ಲಾಭ ಆಗಲಿದೆ. ಮನೆಯಲ್ಲಿ ಸಕಾರಾತ್ಮಕ ವಾತಾವರಣ ಇರಲಿದೆ. ನಿಮ್ಮ ಕಚೇರಿಯಲ್ಲಿ ಈವರೆಗೆ ತಿಳಿಯದೆ ಇದ್ದ ರಹಸ್ಯ ಸಂಗತಿಯೊಂದು ಗೊತ್ತಾಗಲಿದೆ. ಆರೋಗ್ಯ ಉತ್ತಮವಾಗಿ ಇರಲಿದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಬಡ್ತಿ ಹಾಗೂ ವೇತನ ಹೆಚ್ಚಳವನ್ನು ನಿರೀಕ್ಷೆ ಮಾಡಬಹುದು. ಶುಭದಿನ 27. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ಬರಹವನ್ನೇ ವೃತ್ತಿಯಾಗಿ ಮಾಡಿಕೊಂಡವರಿಗೆ ಅತ್ಯುತ್ತಮವಾಗಿದೆ. ವೃತ್ತಿಯಲ್ಲಿ ಏಳ್ಗೆ, ಪ್ರಗತಿ ಕಾಣಲಿದ್ದೀರಿ. ಮಾಹಿತಿ ತಂತ್ರಜ್ಞಾನವನ್ನು ಸಮರ್ಥವಾಗಿ ಬಳಕೆ ಮಾಡಿಕೊಳ್ಳಲಿದ್ದೀರಿ. ಕುಟುಂಬ ಸದಸ್ಯರ ಜತೆಗೆ ಉತ್ತಮ ಬಾಂಧವ್ಯ ಏರ್ಪಡಲಿದೆ. ಆರೋಗ್ಯ ಸ್ವಲ್ಪ ಮಟ್ಟಿಗೆ ಕ್ಷೀಣಿಸಬಹುದು. ಆಹಾರ ನೀರಿನ ಸೇವನೆಯಲ್ಲಿ ಎಚ್ಚರಿಕೆಯಿಂದ ಇರಬೇಕು. ಶುಭದಿನ 29. ವಿಷ್ಣು ಸಹಸ್ರನಾಮ ಪಠಿಸಿರಿ.




ಭೂಮಿ ಆಸ್ತಿ ವಿಚಾರದಲ್ಲಿ ಲಾಭ ಪಡೆಯುವ ಯೋಗವಿದೆ. ಪಿತ್ರಾರ್ಜಿತ ಆಸ್ತಿಯಲ್ಲಿ ನಾನಾ ಬಗೆ ಬಿಕ್ಕಟ್ಟುಗಳು ಕಾಣಿಸಿಕೊಳ್ಳಬಹುದು. ಮನೆಯಲ್ಲಿ ಶುಭ ಕಾರ್ಯಗಳನ್ನು ಆಯೋಜಿಸಿ, ಸವಿಯಲಿದ್ದೀರಿ. ಈ ಅವಧಿಯಲ್ಲಿ ಆರೋಗ್ಯ ಕ್ಷೀಣಿಸುತ್ತದೆ. ದುಬಾರಿ ವಸ್ತುಗಳು ಕಳೆದುಹೋಗಬಹುದು. ಸ್ನೇಹಿತರು ಸಂಬಂಧಿಗಳ ಜತೆ ಉತ್ತಮ ಬಾಂಧವ್ಯ ಇರುತ್ತದೆ. ಶುಭದಿನ 31. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭದಲ್ಲೇ ಶುಭ ಸುದ್ದಿ ಕೇಳಲಿದ್ದೀರಿ. ಆರೋಗ್ಯವು ಉತ್ತಮವಾಗಿರಲಿದೆ. ಈ ಹಿಂದಿನ ದೈಹಿಕ ಸಮಸ್ಯೆಗಳು ನಿವಾರಣೆಯಾಗಲಿವೆ. ಆತ್ಮವಿಶ್ವಾಸ ಸಕಾರಾತ್ಮಕ ಆಲೋಚನೆ ವೃದ್ಧಿಯಾಗಲಿದೆ. ದೈನಂದಿನ ವ್ಯವಹಾರಗಳಲ್ಲಿ ಯಾವುದೇ ಬದಲಾವಣೆ ಮಾಡಿಕೊಳ್ಳದೆ ಮುಂದುವರಿಯಿರಿ. ಉತ್ತಮವಾದ ಹೆಸರು ಪಡೆಯುವ ಅವಕಾಶಗಳಿವೆ. ಶುಭದಿನ 28. ಸುಬ್ರಹ್ಮಣ್ಯ ಜಪ ಗೋಪೂಜೆ ಮಾಡಿರಿ.




ಹಣಕಾಸು ಹೂಡಿಕೆ ಮಾಡಿದ್ದನ್ನು ಈಗ ಬಳಸಿಕೊಳ್ಳಲು ಮುಂದಾಗಲಿದ್ದೀರಿ. ಉದ್ಯಮದಲ್ಲಿ ಉನ್ನತ ಸ್ಥಾನವನ್ನು ತಲುಪಿಕೊಳ್ಳುವ ನಿಟ್ಟಿನಲ್ಲಿ ಮುಖ್ಯವಾದ ತೀರ್ಮಾನ ಕೈಗೊಳ್ಳಲಿದ್ದೀರಿ. ಆದರೆ ಭವಿಷ್ಯದ ನಿಮ್ಮ ಗುರಿಯನ್ನು ನಿರ್ಧರಿಸುವ ಕಡೆಗೆ ಗಮನ ಕೇಂದ್ರೀಕರಿಸುತ್ತೀರಿ. ಆರೋಗ್ಯ ಕ್ಷೀಣಿಸಬಹುದು. ಕುಟುಂಬದ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಶುಭದಿನ 31. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರ್ಥಿಕ ಪ್ರಗತಿ ಸಾಧಿಸಲು ಉತ್ತಮ ಅವಕಾಶಗಳಿವೆ. ಬೌದ್ಧಿಕ ಮತ್ತು ದೈಹಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಅದೃಷ್ಟ ಪರೀಕ್ಷೆ ಮಾಡಬಹುದು. ಪ್ರಾಮಾಣಿಕ ಪರಿಶ್ರಮದಿಂದ ಯಶಸ್ಸು ದೊರೆಯುವ ಅವಕಾಶ ಹೆಚ್ಚಾಗಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಸಿಗಲಿದೆ. ಕೆಲವರಿಗೆ ವಿದೇಶ ಪ್ರಯಾಣ ಯೋಗ ಕೂಡ ಇದೆ. ಶುಭದಿನ 02. ಕನಕಧಾರಾ ಸ್ತೋತ್ರ ಪಠಿಸಿರಿ.




ವೃತ್ತಿಯಲ್ಲಿ ಹಾಕುವ ಪರಿಶ್ರಮಕ್ಕೆ ತಕ್ಕಂತೆ ಫಲಿತಾಂಶ ನಿಮಗೆ ದೊರೆಯಲಿದೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ಲೌಕಿಕ ವ್ಯವಹಾರಗಳಲ್ಲಿ ಸಂತೃಪ್ತಿಯನ್ನು ಅನುಭವಿಸಲಿದ್ದೀರಿ. ನಿಮ್ಮ ಯಶಸ್ಸು ಕಂಡು ಪೋಷಕರು ಸಂತೋಷ ಪಡುತ್ತಾರೆ. ಈಗ ಮಾಡುತ್ತಿರುವ ಕೆಲಸದ ಜತೆ ಜತೆಗೆ ಮತ್ತೊಂದು ಕೆಲಸವನ್ನು ಒಪ್ಪಿಕೊಳ್ಳಲಿದ್ದೀರಿ. ಶುಭದಿನ 29.ಚಂಡಿ ಪಾರಾಯಣ ಮಾಡಿರಿ.